# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1560 (1863)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ರಾಜ್ಯಾದ್ಯಂತ ಅರಣ್ಯ ಪ್ರದೇಶದಿಂದ ಒತ್ತುವರಿಯಾದ ಭೂಮಿ ಮತ್ತು ಕಾಡು ಪ್ರಾಣಿಗಳ ಬಗ್ಗೆ

(ಅ) ರಾಜ್ಯಾದ್ಯಂತ ಮೂರು ವರ್ಷಗಳಿಂದ ಅರಣ್ಯ ಪ್ರದೇಶವೆಂದು ಮೀಸಲಿಟ್ಟಿರುವ ಪ್ರದೇಶನವನ್ನು ಅಕ್ರಮವಾಗಿ ಒತ್ತುವರಿ ಮಾಡಿರುವ ಭೂ ಪ್ರದೇಶವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅರಣ್ಯ ಪ್ರದೇಶವೆಂದು ಘೋಷಿಸಲ್ಪಟ್ಟಿರುವ ಪ್ರದೇಶದಲ್ಲಿ ಅಕ್ರಮ ಒತ್ತುವರಿಯನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಹಾಗೂ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿರುವ ವ್ಯಕ್ತಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಅರಣ್ಯ ಪ್ರದೇಶ ಒತ್ತುವರಿಯಿಂದ, ವನ್ಯ ಮೃಗಗಳು ಗ್ರಾಮಗಳಿಗೆ ನುಗ್ಗಿ ಜನ ಹಾಗೂ ಸಾಕು ಪ್ರಾಣಿಗಳ ಮೇಲೆ ದಾಳಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವನ್ಯ ಮೃಗಗಳ ಹಾವಳಿಯನ್ನು ನಿಯಂತ್ರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಕಳೆದ ಎರಡು ವರ್ಷಗಳಿಂದ ರಾಜ್ಯಾದ್ಯಂತ ವನ್ಯ ಮೃಗಗಳಾದ ಹುಲಿ, ಚಿರತೆ, ಆನೆ, ಸಿಂಹ ಈ ಪ್ರಾಣಿಗಳಿಂದ ದಾಳಿಗೊಳಗಾದವರ ಸಂಖ್ಯೆ ಎಷ್ಟು; ಈ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು; ಮೃತಪಟ್ಟವರಿಗೆ ಮತ್ತು ಗಂಭೀರವಾಗಿ ದಾಳಿಗೊಳಗಾದವರಿವ ಪರಿಹಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಸರ್ಕಾರ ಇದುವರೆಗೂ ಎಷ್ಟು ಜನಕ್ಕೆ ಪರಿಹಾರ ನೀಡಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)